# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ದಿನಗೂಲಿ ಅಥವಾ ಮಿತವೇತನ ಪದವೀಧರರಾಗಿ ಸೇವೆ ಸಲ್ಲಿಸಿ ತದನಂತರ ಅವರ ಸೇವೆಯನ್ನು ಕ್ರಮಬದ್ಧಗೊಳಿಸಲಾದ ನೌಕರರಿಗೆ ಕ.ನಾ.ಸೇ.ನಿ.ನಿಯಮಾವಳಿಯ ನಿಯಮ 247–ಎ ರ ಸೌಲಭ್ಯವನ್ನು ಮಂಜೂರು ಮಾಡುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರಿ ಆದೇಶ ಸಂಖ್ಯೆ: ಆಇ 9 ಎಸ್‌ಆರ್‌ಎ 2012, ದಿ:08–9–2016
2. ಕೆ.ಎ.ಟಿ ಅರ್ಜಿ ಸಂಖ್ಯೆ: 4004–4012/2016 ಶ್ರೀ. ನಾಗರಾಜು ಮತ್ತು ಇತರರು ಮತ್ತು ಇತರೆ 18 ಪ್ರಕರಣಗಳಲ್ಲಿ ನೀಡಿರುವ ತೀರ್ಪು ದಿನಾಂಕ: 29–4–2016.
3. ಕೆ.ಎ.ಟಿ ರಿವ್ಯೂ ಅರ್ಜಿ:321–332/2016 ಮತ್ತು ಇತರೆ 18 ರಿವ್ಯೂ ಅರ್ಜಿಗಳಿಗೆ ತೀರ್ಪು ನೀಡಿದ ದಿನಾಂಕ: 21–9–2016

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರ.ಸಂ.(1) ರಲ್ಲಿನ ಆದೇಶದಲ್ಲಿ, ಪ್ರಾರಂಭದಲ್ಲಿ ದಿನಗೂಲಿ ಅಥವಾ ಮಿತವೇತನ ಪದವೀಧರರಾಗಿ ಸೇವೆ ಸಲ್ಲಿಸಿ, ತದನಂತರ ಸೇವೆಯಲ್ಲಿ ಕ್ರಮಬದ್ಧಗೊಳಿಸಲಾದ ಎಲ್ಲಾ ಸರ್ಕಾರಿ ನೌಕರರಿಗೆ, ನ್ಯಾಯಾಲಯದಲ್ಲಿ ತೀರ್ಪನ್ನು ಪಡೆಯದೇ ಇರುವ ನಿವೃತ್ತ ನೌಕರರಿಗೂ ಸಹ ಕ.ನಾ.ಸೇ.ನಿ.ನಿಯಮಾವಳಿಯ ನಿಯಮ 247–ಎ ರಡಿಯಲ್ಲಿನ ಸೌಲಭ್ಯವನ್ನು ನಿಯಮಾನುಸಾರ ಮಂಜೂರು ಮಾಡುವ ಅಧಿಕಾರವನ್ನು ಆಡಳಿತ ಇಲಾಖೆಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿಗಳು ಮತ್ತು ಇಲಾಖಾ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿದೆ. ಆದಾಗ್ಯೂ ದಿನಾಂಕ:15–2–2012 ರ ಅಧಿಸೂಚನೆಯನುಸಾರ ಕ.ನಾ.ಸೇ. ನಿಯಮಾವಳಿಯ, ನಿಯಮ 247–ಎ ಕ್ಕೆ ಸಮಗ್ರವಾಗಿ ಸೇರ್ಪಡೆ ಮೂಲಕ ತಿದ್ದುಪಡಿ ತರಲಾಗಿದ್ದು, ಸದರಿ ತಿದ್ದುಪಡಿ ನಿಯಮಗಳು ದಿನಾಂಕ:15–2–2012 ರಿಂದ ಜಾರಿಗೆ ಬಂದಿವೆ. ಸದರಿ ನಿಯಮದ ಉಪ ನಿಯಮ (6)(v) ರನ್ವಯ ದಿನಗೂಲಿ ಆಧಾರದ ಮೇಲೆ ಕಾರ್ಯನಿರ್ವಹಿಸಿದ್ದು, ನಂತರ ಯಾರ ಸೇವೆಗಳನ್ನು ಸರ್ಕಾರದಲ್ಲಿ ಕ್ರಮಬದ್ಧಗೊಳಿಸಲಾಗಿರುವುದೋ ಅಂತಹ ನೌಕರರು ಮತ್ತು ಉಪ ನಿಯಮ (6)(vi) ರನ್ವಯ ಯಾವ ಮಿತವೇತನ ಪದವೀಧರರ ಸೇವೆಯನ್ನು ತರುವಾಯದಲ್ಲಿ ಸರ್ಕಾರದಲ್ಲಿ ಕ್ರಮಬದ್ಧಗೊಳಿಸಲಾಗಿದೆಯೋ ಆ ಮಿತವೇತನ ಪದವೀಧರರು ದಿನಾಂಕ:15–2–2012 ಮತ್ತು ತದನಂತರದಲ್ಲಿ ಸೇವೆಯಿಂದ ನಿವೃತ್ತಿ ಹೊಂದಿದಲ್ಲಿ ಅಂತಹ ನೌಕರರು ಈ ಸೌಲಭ್ಯಕ್ಕೆ ಅರ್ಹರಾಗುವುದಿಲ್ಲವೆಂದು ತಿಳಿಸಲಾಗಿದೆ.

ಪ್ರಾರಂಭದಲ್ಲಿ ದಿನಗೂಲಿ ಅಥವಾ ಮಿತವೇತನ ಪದವೀಧರರಾಗಿ ಸೇವೆ ಸಲ್ಲಿಸಿ, ತದನಂತರ ಸರ್ಕಾರಿ ಹುದ್ದೆಗಳಲ್ಲಿ ವಿಲೀನಗೊಳಿಸಲಾದ/ಸೇವೆಯನ್ನು ಕ್ರಮಬದ್ಧಗೊಳಿಸಲಾದ ನೌಕರರುಗಳಿಗೂ, ಕ.ನಾ.ಸೇ.ನಿಯಮಾವಳಿಯ ನಿಯಮ 247–ಎ ರ ಸೌಲಭ್ಯವನ್ನು ಮಂಜೂರು ಮಾಡುವಂತೆ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯು, **ಶ್ರೀ ನಾಗರಾಜು ಮತ್ತು ಇತರರು ಸಲ್ಲಿಸಿದ್ದ ಅರ್ಜಿಗಳಿಗೆ [ಅರ್ಜಿ ಸಂಖ್ಯೆ: 4004–4012/2016] ದಿನಾಂಕ:29.04.2016ರಂದು ನೀಡಿರುವ ತೀರ್ಪಿನಲ್ಲಿ ಆದೇಶಿಸಿದೆ.**

ಸದರಿ ತೀರ್ಪಿನ ವಿರುದ್ಧ ಕ.ಆ.ನ್ಯಾಯ ಮಂಡಳಿಯಲ್ಲಿ ರಾಜ್ಯ ಸರ್ಕಾರವು ಸಲ್ಲಿಸಿದ ರಿವ್ಯೂ ಅರ್ಜಿಗಳನ್ನು ಕರ್ನಾಟಕ ಆಡಳಿತ ನ್ಯಾಯ ಮಂಡಳಿಯು [ಸಂಖ್ಯೆ: 321-332/2016 **ಮತ್ತು ಇತರೆ 18 ರಿವ್ಯೂ ಅರ್ಜಿಗಳು**] ದಿನಾಂಕ:21-9-2016 ರಂದು ವಜಾ ಗೊಳಿಸಿದೆ.

ಈ ಬಗ್ಗೆ ಮಾನ್ಯ ಅಡ್ವೋಕೇಟ್ ಜನರಲ್‌ರವರ ಅಭಿಪ್ರಾಯವನ್ನು ಸಹ ಪಡೆಯಲಾಗಿದೆ. ಈ ಬಗ್ಗೆ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯು ನೀಡಿರುವ ತೀರ್ಪಿನ ಹಿನ್ನೆಲೆಯಲ್ಲಿ ಸಮಗ್ರವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಆಇ 4 ಎಸ್‌ಆರ್‌ಎ 2016, ಬೆಂಗಳೂರು ದಿ:10-4-2017**

ಮೇಲೆ (1)ರಲ್ಲಿ ಓದಲಾದ ಸರ್ಕಾರಿ ಆದೇಶವನ್ನು ಭಾಗಶ: ಮಾರ್ಪಡಿಸಿ, ದಿನಾಂಕ:15.2.2012 ರಿಂದ ತಿದ್ದುಪಡಿಯಾದ ಕರ್ನಾಟಕ ನಾಗರೀಕ ಸೇವಾ ನಿಯಮಗಳ ನಿಯಮ 247-ಎ ರ ಅವಕಾಶಗಳನ್ವಯ, ಈ ನಿಯಮಗಳ ಸೌಲಭ್ಯವು ನೇರ ನೇಮಕಾತಿ ಹೊಂದಿದ ಸರ್ಕಾರಿ ನೌಕರರಿಗೆ ಅನ್ವಯವಾಗುತ್ತಿದ್ದು, ದಿನಗೂಲಿ/ಮಿತವೇತನ ಪದವೀಧರರಾಗಿ ಕಾರ್ಯ ನಿರ್ವಹಿಸಿ ನಂತರ ಸರ್ಕಾರಿ ಸೇವೆಯಲ್ಲಿ ಸಕ್ರಮಗೊಂಡ ಸರ್ಕಾರಿ ನೌಕರರಿಗೆ ಅನ್ವಯವಾಗುವುದಿಲ್ಲವೆಂಬ ನಿಬಂಧನೆಯಿದ್ದರೂ, ನ್ಯಾಯಾಲಯಗಳ ತೀರ್ಪುಗಳ ಹಿನ್ನೆಲೆಯಲ್ಲಿ ಹಾಗೂ ಕರ್ನಾಟಕ ನಾಗರೀಕ ಸೇವಾ ನಿಯಮಗಳ ನಿಯಮ 6 ರ ಅವಕಾಶದಂತೆ ಈ ವರ್ಗದ ಸರ್ಕಾರಿ ನೌಕರರಿಗೂ ಸಹ ನೇರ ನೇಮಕಾತಿಯಿಂದ ನೇಮಕಗೊಂಡ ಇತರೆ ಸರ್ಕಾರಿ ನೌಕರರಿಗೆ ಅನ್ವಯವಾಗುವಂತೆ ಗರಿಷ್ಠ 2 ವರ್ಷಗಳ ಅರ್ಹತಾದಾಯಕ ಸೇವೆಯನ್ನು ಪಿಂಚಣಿ ಉದ್ದೇಶಕ್ಕೆ ಅಧಿಕ ಅರ್ಹತಾದಾಯಕ ಸೇವೆಯಾಗಿ ಪರಿಗಣಿಸಲು ಅನುಮತಿಸಲಾಗಿದೆ.

ನಿಯಮ 247-ಎ ರಲ್ಲಿನ ಅವಕಾಶಗಳನ್ವಯ ಹೆಚ್ಚುವರಿ ಸೇವೆ ಸೇರ್ಪಡೆ ಕುರಿತ ಪ್ರಕರಣಗಳನ್ನು ಆಡಳಿತ ಇಲಾಖೆಯು ಸಂಬಂಧಪಟ್ಟ ಎಲ್ಲಾ ಅಗತ್ಯ ಮಾಹಿತಿ/ದಾಖಲೆಗಳೊಂದಿಗೆ ಪರಿಶೀಲಿಸಿ, ಅರ್ಹ ಪ್ರಕರಣಗಳಲ್ಲಿ ಸೂಕ್ತ ಆದೇಶ ಹೊರಡಿಸಲು ಆಡಳಿತ ಇಲಾಖೆಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿಗಳು ಮತ್ತು ಇಲಾಖಾ ಕಾರ್ಯದರ್ಶಿಗಳು ಅಧಿಕಾರಯುಕ್ತರಾಗಿರುವರು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

Suvarna B.S.

(ಬಿ.ಎಸ್.ಸುವರ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಸೇವೆಗಳು-1).
**(ದೂರವಾಣಿ ಸಂಖ್ಯೆ: 080-22033135)**

**ಇವರಿಗೆ:**

1. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳು.
2. ಎಲ್ಲಾ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು,

...3/-

3. ಎಲ್ಲಾ ಇಲಾಖಾ ಮುಖ್ಯಸ್ಥರು.
4. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
5. ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
6. ಪ್ರಧಾನ ಮಹಾಲೇಖಪಾಲರು (ಸಿವಿಲ್ ಮತ್ತು ವಾಣಿಜ್ಯ ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.
7. ಮಹಾಲೇಖಪಾಲರು (ಕಂದಾಯ ಸ್ವೀಕೃತಿ ಮತ್ತು ಕಾಮಗಾರಿಗಳು ಮತ್ತು ಅರಣ್ಯ ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.
8. ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಬೆಂಗಳೂರು.
9. ರಿಜಿಸ್ಟ್ರಾರ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
10. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
11. ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಬೆಂಗಳೂರು.
12. ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು.
13. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ವಿಧಾನ ಪರಿಷತ್ ಬೆಂಗಳೂರು.
14. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
15. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು.
16. ಸಂಕಲನಕಾರರು, ಕರ್ನಾಟಕ ಗೆಜೆಟ್, ಮುಂದಿನ ಪ್ರಕಟಣೆಯಲ್ಲಿ ಪ್ರಕಟಿಸುವುದಕ್ಕಾಗಿ
17. ಅಧ್ಯಕ್ಷರು, ಕರ್ನಾಟಕ ರಾಜ್ಯ ನಿವೃತ್ತ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು..
18. ಕರ್ನಾಟಕ ಸರ್ಕಾರ ಸಚಿವಾಲಯದ ಗ್ರಂಥಾಲಯ/ವಿಧಾನ ಮಂಡಲದ ಗ್ರಂಥಾಲಯ.
19. ವಾರಪತ್ರ.
20. ಶಾಖೆಯ ರಕ್ಷಾ ಕಡತ.
21. ಗಣಕ ಯಂತ್ರ ಶಾಖೆ.
22. ಕರ್ನಾಟಕ ಸರ್ಕಾರದ ಅಧಿಕೃತ ಅಂತರ್ಜಾಲತಾಣ: **www.finance.kar.nic.in.**

[ಕ್ರ.ಸಂ. 6 ರಿಂದ 14 ರವರೆಗೆ ಪತ್ರದ ಮೂಲಕ]